ಪ್ರಾದೇಶಿಕ ಸಾರಿಗೆ ಕಛೇರಿ

501(1101); ಶ್ರೀ ಸಿ.ಎನ್. ಬಾಲಕೃಷ್ಣ

ಅ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚನ್ನರಾಯಪಟ್ಟಣದಲ್ಲಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಯವರ ಕಛೇರಿಯನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಕಛೇರಿಯನ್ನು ತೆರೆಯಲು ಪಟ್ಟಣದ ಯಾವ ಭಾಗದಲ್ಲಿ ಸ್ಥಳ ಗುರುತಿಸಲಾಗಿದೆ; ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ) ಅಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಡಯಾಲಿಸಿಸ್ ಕೇಂದ್ರಗಳು

502(1102); ಶ್ರೀ ಸಿ.ಎನ್. ಬಾಲಕೃಷ್ಣ (ಶ್ರವಣಬೆಳಗೊಳ)

ಅ) ರಾಜ್ಯದಲ್ಲಿರುವ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ "ಡಯಾಲಿಸಿಸ್" ಕೇಂದ್ರಗಳನ್ನು ತೆರೆಯುವುದಾಗಿ ಸರ್ಕಾರ ಘೋಷಣೆ ಮಾಡಿರುವುದು ನಿಜವೆ;

ಆ) ಹಾಗಿದ್ದಲ್ಲಿ, ಎಷ್ಟು "ಡಯಾಲಿಸಿಸ್" ಕೇಂದ್ರಗಳನ್ನು ತೆರೆಯಲಾಗಿದೆ (ತಾಲ್ಲೂಕುವಾರು ವಿವರಗಳನ್ನು ನೀಡುವುದು);

ಇ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚನ್ನರಾಯಪಟ್ಟಣದಲ್ಲಿರುವ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ "ಡಯಾಲಿಸಿಸ್" ಕೇಂದ್ರವನ್ನು ತೆರೆಯಲು ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಈ) ಬಂದಿದ್ದಲ್ಲಿ ಆಸ್ಪತ್ರೆಯ ಆವರಣದಲ್ಲಿ "ಡಯಾಲಿಸಿಸ್" ಕೇಂದ್ರವನ್ನು ತೆರೆಯಲು ಹೊಸ ಕಟ್ಟಡ ನಿರ್ಮಿಸಲಾಗುವುದೇ; ಯಾವಾಗ ಹೊಸ ಕಟ್ಟಡವನ್ನು ನಿರ್ಮಿಸಲಾಗುವುದು ಹಾಗೂ ಒದಗಿಸಲಾಗುವ ಅನುದಾನವೆಷ್ಟು (ವಿವರಗಳನ್ನು ನೀಡುವುದು)?

ಶ್ರೀ ಯು.ಟಿ. ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೌದು.

ರಾಜ್ಯದಲ್ಲಿ ಪ್ರತಿ ತಾಲ್ಲೂಕು ಆಸ್ಪತ್ರೆಯಲ್ಲಿ ಡಯಾಲಿಸಿಸ್ ಘಟಕ ಸ್ಥಾಪಿಸುವ ಉದ್ದೇಶದಿಂದ ಮೊದಲನೇ ಹಂತವಾಗಿ ಪ್ರತಿ ಜಿಲ್ಲೆಯ ಒಂದೊಂದು ತಾಲ್ಲೂಕು ಆಸ್ಪತ್ರೆಯಲ್ಲಿ ಈಗ ಡಯಾಲಿಸಿಸ್ ಘಟಕ ಸ್ಥಾಪಿಸಲಾಗಿದೆ.

ಆ) ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ.

ಇ) ಬಂದಿದೆ.

ಈ) ಡಯಾಲಿಸಿಸ್ ಘಟಕವನ್ನು ಹಾಲಿ ಇರುವ ಸ್ಥಳಾವಕಾಶದ ಲಭ್ಯತೆಯ ಆಧಾರದಲ್ಲಿ ಸ್ಥಾಪಿಸಲಾಗಿದೆ. ಆದರೆ ಘಟಕ ಸ್ಥಾಪಿಸಲು ಹೊಸ ಕಟ್ಟಡ ನಿರ್ಮಿಸುವ ಯೋಜನೆ ಹಾಲಿ ಸರ್ಕಾರದ ಮುಂದೆ ಇರುವುದಿಲ್ಲ.

ವಿದ್ಯಾರ್ಥಿ ನಿಲಯವನ್ನು ತೆರೆಯುವುದು

503(1103); ಶ್ರೀ ಸಿ.ಎನ್. ಬಾಲಕೃಷ್ಣ (ಶ್ರವಣಬೆಳಗೋಳ)

ಅ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅಣತಿ ಗ್ರಾಮದಲ್ಲಿ ಹಿಂದುಳಿದ ವರ್ಗಗಳ ನಿಲಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಈ ಗ್ರಾಮದಲ್ಲಿ ಬಾಲಕರ ಮತ್ತು ಬಾಲಕಿಯರ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ;